B.K. Arts, Sci. & Com. College, Chikodi — NAAC Accreditation 'A' Grade

<u>ಕರ್ನಾಟಕ ಸರ್ಕಾರ</u>

ಕ್ರಮಾಂಕ: ಇಡಿ 213 ಯುಆರ್‌ಸಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 06-07-2018

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

Permission from Govt of Karnataka to start Msc Botany w.e.f 2018-19

ಇವರಿಗೆ
ಕುಲಸಚಿವರು,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೆ,

ವಿಷಯ : 2018-19 ನೇ ಶೈಕ್ಷಣಿಕ ಸಾಲಿನಿಂದ ಬಸವಪ್ರಭು ಕೋರೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಚಿಕ್ಕೋಡಿ ಅಂಚೆ-591201 ಮತ್ತು ತಾಲ್ಲೂಕ್, ಬೆಳಗಾವಿ ಜಿಲ್ಲೆ-590001 ಇಲ್ಲಿ ಹೊಸ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ : ತಮ್ಮ ಪತ್ರ ಸಂಖ್ಯೆ:ರಾಚವಿವಿಬೆ/ಕುಸಕಾ/2017-18/6031/2, ದಿನಾಂಕ: 31-03-2018.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2019-19ನೇ ಶೈಕ್ಷಣಿಕ ಸಾಲಿನಿಂದ ಬಸವಪ್ರಭು ಕೋರೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಚಿಕ್ಕೋಡಿ ಅಂಚೆ-591201 ಮತ್ತು ತಾಲ್ಲೂಕ್, ಬೆಳಗಾವಿ ಜಿಲ್ಲೆ - ಇಲ್ಲಿ ಹೊಸ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆ ಕೋರಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 2018-19 ನೇ ಶೈಕ್ಷಣಿಕ ಸಾಲಿನಿಂದ ಬಸವಪ್ರಭು ಕೋರೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಚಿಕ್ಕೋಡಿ ಅಂಚೆ-591201 ಮತ್ತು ತಾಲ್ಲೂಕ್, ಬೆಳಗಾವಿ ಜಿಲ್ಲೆ- ಇಲ್ಲಿ ಈ ಕೆಳಕಂಡಂತೆ ಹೊಸ ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಎಸ್ಸಿ (ಸಸ್ಯಶಾಸ್ತ್ರ) | ವಿಶ್ವವಿದ್ಯಾಲಯದ ಪಠ್ಯಕ್ರಮದಂತೆ ಎಲ್ಲ ಕಡ್ಡಾಯ ವಿಷಯಗಳು | 20 (ಇಪ್ಪತ್ತು) |

ಷರತ್ತುಗಳು:-

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸ್‌ಎಂದು ಪರಿಗಣಿಸತಕ್ಕದ್ದು;

2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

TO Mrs. Mamma(?) P.S.
11-7-18

2...

4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ: 13–8–1997 ರಂದು ವಿಶಾಖ ತ/ ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

06/07/18

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು -2)

06/7/2018

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು – 560001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ
3. ಪ್ರಾಂಶುಪಾಲರು, ಬಸವಪ್ರಭು ಕೋರೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಕಾಲೇಜು ರಸ್ತೆ, ಚಿಕ್ಕೋಡಿ ಅಂಚೆ–591201 ಮತ್ತು ತಾಲ್ಲೂಕ್, ಬೆಳಗಾವಿ ಜಿಲ್ಲೆ.

PRINCIPAL
KLES'S Basavaprabhu Kore
Arts, Science and Commerce College
CHIKODI - 591 201

## Translation from Regional language Kannada to English

**Permission issued by the Chief Secretary, Government of Karnataka to start PG course (MSc Botany) in our institution. The letter issued is in regional language (Kannada). Hence these two pages are translated details.**

### Government of Karnataka

Sl.No: ED 213 URC 2018

Ministry,
Government of Karnataka
M.S Building Bengaluru.
Date :- 06-07-2018

NAAC-A K.L.E. S's BASAVAPRABHU KORE COLLEGE CHIKODI

From,

Chief Secretary to Government
Education Department (Higher Education)
Bengaluru – 560001

To,

The Registrar
Rani Channamma University
Belagavi.

Respected Sir,

**Sub:** To seek the permission to start a new Post Graduation Course at Basavaprabhu Kore Arts Science and Commerce College Chikodi – 591201.Tq Chikodi, District : Belagavi from the academic year 2018-19.

**Ref:** Letter No. ರಾಚವಿವಿಬೆ/ಕುಸಕಾ/ 2017-18/6031/2, Dated 31-03-2018

***

For the above cited subject, from the academic year 2018-19 Basavaprabhu Kore Arts Science and Commerce College, Chikodi -591201 and taluk ,Dist: Belagavi- Here the application submitted to Rani Channamma University for the purpose of initiating the new Post Graduate course has been reviewed based on the report of The Rani Channamma University Local inquiry Committee and The Syndicate Committee recommendation in consultation with the Vidyavishayaka Parishat. Exercising authority under sub section (11) of article of the Karnataka State Universities Act 2000,

Basavaprabhu Kore Arts Science and Commerce College Chikodi – 591201.Tq Chikodi, District : Belagavi. From the academic year 2018-19 I am directed to inform the Government's Recommendation to grant the following conditions.

| Course | Subject | Students strength |
|---|---|---|
| M.Sc (Botany) | All Compulsory subjects as per university Curriculum | 20 ( Twenty) |

**Conditions:-**

1. The Government shall not grant any grants to the above course of the college, despite any clauses in the grant code applicable to colleges. It shall be considered a permanent unaided course.
2. The above mentioned college is Subject to the University College Code of Conduct:
3. Students may not be admitted in addition to the specified student's strength.
4. Strict adherence to the prevailing government regulations, orders and university directives:
5. Every condition imposed by local inquiry committee must be strictly followed.
6. The college/governing body shall set a university quota of 50% (where applicable) according to the university norms: and from time to time, the university shall collect the fee only and no other fee.
7. According to the supreme court verdict Dated 13-08-1997,in the case of Vishaka v/s Rajasthan government, any person/ student who commits a riot or sexually harasses a Woman in college is considered a cognizable offense, revoking the admission of the students / person involved in such activities: and prosecuting that college / governing body shall create a grievance committee under the direction of the supreme court.
8. To conduct a good course for the growth of college students the principal/ governing body of the college should make the student / faculty friendly.
9. No student's marks card, admission or other enrollment of the college governing body shall be unnecessarily withheld until the student's admission is approved by the university or for a period of six months, whichever is earlier.
10. The college governing body shall not trouble the students while issuing transfer Certificate and shall collect only the remaining tuition fee for the semester / year and not any other fees.
11. Capitation fee shall not be collected in any form.
12. The admission roaster system must be strictly followed.

Yours Faithfully
-sd-
( M.A Ahmed Jaan)
Deputy secretary to Government, Higher
Education Department ( Universities)

**Copies:**

1. Collegiate Commissioner/ Director, Bengaluru.
2. Regional Directorate,Department of Collegiate Education, Dharwad
3. Principal , Basavaprabhu Kore Arts Science and Commerce College Chikodi – 591201.Tq Chikodi,

K.L.E. S's BASAVAPRABHU KORE COLLEGE NAAC-A CHIKODI

PRINCIPAL
B. K. Arts, Science & Commerce. College
CHIKODI - 591 201.